## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 220 |
| 2. | ಸದಸ್ಯರ ಹೆಸರು | : | ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) |
| 3. | ಉತ್ತರಿಸುವ ದಿನಾಂಕ | : | 28/01/2026 |
| 4. | ಉತ್ತರಿಸುವ ಸಚಿವರು | : | ಮಾನ್ಯ ಲೋಕೋಪಯೋಗಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ನೌಕರರ ವಾಸ್ತವ್ಯಕ್ಕೆ ಅನುಕೂಲವಾಗುವಂತೆ ಲೋಕೋಪಯೋಗಿ ಇಲಾಖೆಯಿಂದ ಕಳೆದ 2 ವರ್ಷಗಳಲ್ಲಿ ದಾವಣಗೆರೆ, ಚಿತ್ರದುರ್ಗ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ನಿರ್ಮಿಸಲಾಗಿರುವ ವಸತಿ ಗೃಹಗಳ ಸಂಖ್ಯೆ ಎಷ್ಟು: (ತಾಲ್ಲೂಕುವಾರು ಮಾಹಿತಿ ನೀಡುವುದು) | ಕಳೆದ 2 ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ದಾವಣಗೆರೆ, ಚಿತ್ರದುರ್ಗ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಯಾವುದೇ ವಸತಿ ಗೃಹಗಳನ್ನು ನಿರ್ಮಿಸಲಾಗಿರುವುದಿಲ್ಲ.<br><br>2024-25ನೇ ಸಾಲಿನಲ್ಲಿ ತುಮಕೂರು ಜಿಲ್ಲೆ, ತಿಪಟೂರು ತಾಲ್ಲೂಕಿನಲ್ಲಿ ರೂ.100.00 ಲಕ್ಷಗಳಲ್ಲಿ 1 ಸಂಖ್ಯೆಯ ವಸತಿಗೃಹವನ್ನು ನಿರ್ಮಿಸಲಾಗಿದ್ದು, ಪ್ರಸ್ತುತ ವಸತಿಗೃಹವನ್ನು ಹಂಚಿಕೆ ಮಾಡಲಾಗಿರುತ್ತದೆ. |
| ಆ) | ಈ ಜಿಲ್ಲೆಗಳಲ್ಲಿ ಕಳೆದ 2 ವರ್ಷಗಳಲ್ಲಿ ನಿರ್ಮಿಸಲಾಗಿರುವ ವಸತಿ ಗೃಹಗಳಿಗೆ ಸರ್ಕಾರ ಎಷ್ಟು ಅನುದಾನ ಬಿಡುಗಡೆ ಮಾಡಿದೆ? (ಜಿಲ್ಲಾವಾರು ಮಾಹಿತಿ ನೀಡುವುದು) | ತಿಪಟೂರು ಪಟ್ಟಣದಲ್ಲಿ 1 ಸಂಖ್ಯೆಯ ಸರ್ಕಾರಿ ವಸತಿಗೃಹ ನಿರ್ಮಾಣಕ್ಕೆ ರೂ.73.57 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದ್ದು, ಈ ಪೈಕಿ ರೂ.73.57 ಲಕ್ಷಗಳ ವೆಚ್ಚ ಭರಿಸಲಾಗಿರುತ್ತದೆ. |

**ಸಂಖ್ಯೆ: ಲೋಇ 04 ಬಿಎಲ್ ಕ್ಯೂ 2026**

**(ಸತೀಶ ಜಾರಕಿಹೊಳಿ)**
ಲೋಕೋಪಯೋಗಿ ಸಚಿವರು.